ಶ್ರೀ ಖಾದ್ರಿ ಎಸ್.ಎಸ್.(ಶಿಗ್ಗಾಂವ್): ಮಾನ್ಯ ಕನ್ನಡ ಮತ್ತು ಸಂಸ್ಕೃತಿ ಇಲಾಖಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಖ್ಯಾತ ಸಾಹಿತಿ, ಉತ್ತಮ ಬರಹಗಾರರಾದ ಶ್ರೀ ವಿ.ಕೆ.ಗೋಕಾಕ್ ಇವರ ಜನ್ಮ ಸ್ಥಳವಾರ ಸವಣೂರಿನಲ್ಲಿ ಇವರ ಹೆಸರಿನಿಂದ ಸುಸಜ್ಜಿತವಾದ ಭವನ ಕಟ್ಟುವ ವಿಚಾರ ಸರ್ಕಾರದ ಗಮನದಲ್ಲಿಯೇ?

ಆ) ಶ್ರೀ ವಿ.ಕೆ.ಗೋಕಾಕ್ ಕಲಾಮಂದಿರ ನಿರ್ಮಾಣಕ್ಕೆ ಎಷ್ಟು ಹಣ ಮೀಸಲಿಡಲಾಗಿದೆ?

ಇ) ಯಾವ ವರ್ಷದಲ್ಲಿ ಕಟ್ಟಡ ಕಟ್ಟಲಿಕ್ಕೆ ಶಂಕು ಸ್ಥಾಪನೆ ನೆರವೇರಿಸುತ್ತೀರಿ?

ಈ) ಇಲ್ಲವಾದಲ್ಲಿ ಕಾರಣವೇನು?

ಶ್ರೀಮತಿ ರಾಣಿಸತೀಶ (ಕನ್ನಡ ಮತ್ತು ಸಂಸ್ಕೃತಿ ಇಲಾಖಾ ರಾಜ್ಯ ಸಚಿವೆಯವರು):

ಅ) ಇಲ್ಲ

ಆ) ಉದ್ಭವಿಸುವುದಿಲ್ಲ

ಇ) ಉದ್ಭವಿಸುವುದಿಲ್ಲ.

ಈ) ಉದ್ಭವಿಸುವುದಿಲ್ಲ

ಹಾವೇರಿಯಲ್ಲಿ ಕ್ರೀಡಾಂಗಣ ನಿರ್ಮಾಣ ಕುರಿತು.

45(354)

ಶ್ರೀ ಖಾದ್ರಿ ಎಸ್.ಎಸ್. (ಶಿಗ್ಗಾಂವ್): ಮಾನ್ಯ ಯುವಜನ ಸೇವಾ ಮತ್ತು ಕ್ರೀಡಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹಾವೇರಿ ಪಟ್ಟಣದಲ್ಲಿ ಉತ್ತಮ ಕ್ರೀಡಾಂಗಣ ಇಲ್ಲದಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಬಂದಲ್ಲಿ ಸರ್ಕಾರ ಕೈಗೊಂಡ ಕ್ರಮವೇನು?

ಇ) ಸುಸಜ್ಜಿತವಾದ ಕ್ರೀಡಾಂಗಣ ನಿರ್ಮಾಣಕ್ಕೆ ಎಷ್ಟು ಹಣ ಮೀಸಲಾಗಿದೆ.

ಈ) ಇಲ್ಲವಾದರೆ ಕಾರಣಗಳೇನು?

ಶ್ರೀ ಎಸ್.ಎಸ್.ಮಲ್ಲಿಕಾರ್ಜುನ್ (ಮಾನ್ಯ ಯುವಜನ ಸೇವಾ ಮತ್ತು ಕ್ರೀಡಾ ರಾಜ್ಯ ಸಚಿವರು):

ಅ) ಹೌದು.

ಆ) ಹಾವೇರಿಯಲ್ಲಿ ತಾಲ್ಲೂಕು ಕ್ರೀಡಾಂಗಣ ನಿರ್ಮಾಣಕ್ಕೆ ಸರ್ಕಾರವು ಆಡಳಿತಾತ್ಮಕ ಅನುಮೋದನೆಯನ್ನು 1992-93ರಲ್ಲಿ ನೀಡಿದೆ. ಇದುವರೆಪಿಗು ರೂ. 14.68 ಲಕ್ಷ ವೆಚ್ಚ ಮಾಡಿ ಕ್ರೀಡಾಂಗಣದ ಆಟದ ಮೈದಾನ ಸಮತಟ್ಟು ಮಾಡಲಾಗಿದೆ. ಸದರಿ ಕ್ರೀಡಾಂಗಣದ ಆವರಣದಲ್ಲಿ ಒಳಾಂಗಣ ಕ್ರೀಡಾಂಗಣದ ಕಟ್ಟಡವನ್ನು ಪ್ರಾರಂಭಿಸಿದ್ದು ಮೇಲ್ಚಾವಣಿ ಮಟ್ಟಕ್ಕೆ ಬಂದಿದೆ. ಕಾಮಗಾರಿ ಅರ್ಧಕ್ಕೆ ನಿಂತಿದೆ. ಹಾವೇರಿ ತಾಲ್ಲೂಕು ಕೇಂದ್ರವು ಜಿಲ್ಲಾ ಕೇಂದ್ರವಾಗಿ ಅಸ್ತಿತ್ವಕ್ಕೆ ಬಂದ ಮೇಲೆ ಹಾವೇರಿ ತಾಲ್ಲೂಕು ಕ್ರೀಡಾಂಗಣವನ್ನು ಜಿಲ್ಲಾ ಕ್ರೀಡಾಂಗಣವನ್ನಾಗಿ ಮೇಲ್ದರ್ಜೆಗೇರಿಸಲು ಸರ್ಕಾರವು ನಿರ್ಧರಿಸಿದೆ.

ಇ) ಪ್ರಸ್ತುತ ಸಾಲಿನಲ್ಲಿ ಈ ಉದ್ದೇಶಕ್ಕಾಗಿ ರೂ.20.00 ಲಕ್ಷಗಳನ್ನು ಮಂಜೂರು ಮಾಡಲಾಗಿದೆ.

ಈ) ಉದ್ಭವಿಸುವುದಿಲ್ಲ.

ಬೀಡಿ ಕಾರ್ಮಿಕರಿಗೆ ವಸತಿ ಸೌಲಭ್ಯ.

47(390)

ಶ್ರೀ ಖಾದ್ರಿ ಎಸ್.ಎಸ್. (ಶಿಗ್ಗಾಂವ್): ಮಾನ್ಯ ಕಾರ್ಮಿಕ ಮತ್ತು ವಕ್ಫ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯಪಿಟ್ಟು ಉತ್ತರಿಸುವರೆ?

ಅ) ಬೀಡಿ ಕಾರ್ಮಿಕರಿಗೆ ವಸತಿ ಸೌಲಭ್ಯ ಕಲ್ಪಿಸುವ ವಿಚಾರ ಸರ್ಕಾರದ ಗಮನದಲ್ಲಿದೆಯೇ?

ಆ) ವಸತಿ ಸೌಲಭ್ಯ ಕಲ್ಪಿಸುವ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮ ಯಾವುವು?

ಇ) ಕಾರ್ಮಿಕರ ಹಾಗು ಸರ್ಕಾರದ ಮಧ್ಯೆ ಹಣದ ಒಪ್ಪಂದ ಮಾಡಿಕೊಳ್ಳುವಿರೋ ಅಥವಾ ಸಂಪೂರ್ಣ ಸರ್ಕಾರವೇ ಹೊರೆ ಹೊರುವುದೊ?

ಈ) ಈ ಯೋಜನೆ ಯಾವ ವರ್ಷದಿಂದ ಪ್ರಾರಂಭವಾಗುತ್ತದೆ?

ಉ) ಸರ್ಕಾರ ಈ ಯೋಜನೆಗೆ ಎಷ್ಟು ಹಣ ಮೀಸಲಿಟ್ಟಿರುತ್ತದೆ? ಇಲ್ಲವಾದಲ್ಲಿ